ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಗುರುವಾರ, ದಿನಾಂಕ : 12 ನೇ ಮಾರ್ಚ್, 2020

ಜಗದ್ಗುರು ಬಸವಣ್ಣನವರ ಭಾವಚಿತ್ರದ ಕುರಿತು

ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :-

691 (985) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರವು ಶ್ರೀ ಜಗದ್ಗುರು ಬಸವಣ್ಣನವರ ಭಾವಚಿತ್ರವನ್ನು ಸರ್ಕಾರಿ ಕಛೇರಿಯಲ್ಲಿ ಅಳವಡಿಸಲು ಯಾವ ದಿನಾಂಕದಿಂದ ಆದೇಶ ಹೊರಡಿಸಲಾಗಿದೆ; ಪ್ರತಿಯನ್ನು ನೀಡುವುದು;

(ಆ) ಎಲ್ಲಾ ಸರ್ಕಾರಿ ಕಛೇರಿಯಲ್ಲಿ ಇನ್ನೂ ಬಸಣ್ಣನವರ ಭಾವಚಿತ್ರವನ್ನು ಪೂರ್ತಿಯಾಗಿ ಅಳವಡಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬಂದಿದ್ದರೆ, ಎಲ್ಲಾ ಸರ್ಕಾರಿ ಕಛೇರಿಗಳಲ್ಲಿ ಬಸವಣ್ಣನವರ ಭಾವಚಿತ್ರವನ್ನು ಕಡ್ಡಾಯವಾಗಿ ಅಳವಡಿಸುವಂತೆ ಯಾವಾಗ ನಿರ್ದೇಶನ ನೀಡಲಾಗುವುದು;

(ಈ) ಈ ಸಂಬಂಧ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು? (ವಿವರವಾದ ಮಾಹಿತಿ ನೀಡುವುದು)